<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.</u>

**ಸಿ.ಸಿ. ಸಂಖ್ಯೆಃ 491/2023**

**ಸಾಕ್ಷಿಯನ್ನು ದಿಃ 12.01.2026 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಹೆಸರು | ಬೀರೇಶ | ಸಿಡಬ್ಲ್ಯೂಃ 5 | ಪಿಡಬ್ಲ್ಯೂಃ 5 |
| ತಂದೆಯ ಹೆಸರು | ಲಕ್ಕಪ್ಪ | | |
| ವಯಸ್ಸು | 45 ವರ್ಷ | | |
| ಕೆಲಸ | ವ್ಯವಸಾಯ | | |
| ವಾಸಸ್ಥಳ | ಕಲ್ಲುಣಿಕೆ, ಹುಣಸೂರು. | | |

## ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ಸಾಕ್ಷಿ ನಿಪಿ–2ರ ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ–2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 4 ವರ್ಷಗಳ ಹಿಂದೆ ಹುಣಸೂರು ಪಟ್ಟಣ ಠಾಣೆಯಲ್ಲಿ ಹಾಕಿದ್ದೇನೆ. ಯಾವ ಉದ್ದೇಶಕ್ಕಾಗಿ ಸಹಿ ಹಾಕಿದ್ದೇನೆ ಎಂದು ಗೊತ್ತಿಲ್ಲ. ನಿಪಿ–2 ರಲ್ಲಿ ಏನು ಬರೆಯಲಾಗಿದೆ ಎಂದು ಗೊತ್ತಿಲ್ಲ. ನನ್ನ ಜೊತೆ ಬೇರೆ ಯಾರು ಸಹಿ ಹಾಕಿದ್ದಾರೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ನ್ಯಾಯಾಲಯದ ಮುಂದಿರುವ ಕಲ್ಲನ್ನು ಈ ಹಿಂದೆ ನೋಡಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

## ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

ಚಾಸಾ–2 ಮತ್ತು ಆರೋಪಿತರಿಗೆ ಗಲಾಟೆಯಾದ ಸಂಬಂಧ ದಿಃ 15.07.2023 ರಂದು ನನ್ನ ಮತ್ತು ಚಾಸಾ–6 ರವರ ಸಮಕ್ಷಮ ಚಾಸಾ–2 ರವರು ಹಾಜರಿದ್ದು, ಸ್ಥಳ ತೋರಿಸಿದ ಮೇರೆಗೆ ಹುಣಸೂರು ಪಟ್ಟಣದ ಕಲ್ಲುಣಿಕೆ ಸರ್ಕಲ್ ನಲ್ಲಿರುವ ಕೃಷ್ಣಪ್ಪರವರ ತೋಟದ

ಮನೆಯ ಎದುರು ಹಾದುಹೋಗಿರುವ ಬಿ.ಎಂ ಬೈಪಾಸ್ ರಸ್ತೆಯ ದಕ್ಷಿಣದ ಪುಟ್ಪಾತ್ ನಲ್ಲಿ ಪೋಲಿಸರು ಬೆಳಿಗ್ಗೆ 8 ರಿಂದ 9 ಗಂಟೆಯವರೆಗೆ ಮಹಜರು ಮಾಡಿದಾಗ ನಾನು ನಿಪಿ-2ಕ್ಕೆ ಸಹಿ ಹಾಕಿದ್ದೇನೆ ಎಂದರೆ ಸರಿಯಲ್ಲ. ನನಗೆ ಆ ಸಮಯದಲ್ಲಿ ಚಾಸಾ-2 ರವರು ಹಾಜರುಪಡಿಸಿದ ಒಂದು ಕಲ್ಲನ್ನು ಪೋಲಿಸರು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ . ನನಗೆ ನಿಪಿ-2ರ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ. SSG ವಕೀಲರಿಂದಃ**

ಇಲ್ಲ ಎನ್ನುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸ. ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ. ಎಂ. ಎಫ್. ಸಿ., ಹುಣಸೂರು.